ಶಿಕ್ಷಕರ ಕೊರತೆ

1414(1685); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟ)

ಅ) ರಾಜ್ಯದಲ್ಲಿ ಕೊರತೆ ಇರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಂಖ್ಯೆ: ಎಷ್ಟು (ವಿವರ ನೀಡುವುದು)

ಆ) ರಾಜ್ಯದಲ್ಲಿರುವ ನಿರುದ್ಯೋಗಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಂಖ್ಯೆ ಎಷ್ಟು; ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರಾಗಿ ಹೊರ ಹೊಮ್ಮುತ್ತಾರೆ;

ಇ) ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಎಷ್ಟು ಕಾಲಾವಧಿಯಲ್ಲಿ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 16732 ಹಾಗೂ ಪ್ರೌಢಶಾಲೆಗಳಲ್ಲಿ ಒಟ್ಟು 2346 ಖಾಲಿ ಹುದ್ದೆಗಳಿರುತ್ತವೆ.

ಆ) ಡಿ.ಇಡಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳ ವಿವರ

2012ನೇ ಸಾಲಿನಲ್ಲಿ	–	20560
2013ನೇ ಸಾಲಿನಲ್ಲಿ	–	16663
2014ನೇ ಸಾಲಿನಲ್ಲಿ	–	6394

ಇ) **ಮತ್ತು ಈ)** ಸರ್ಕಾರದ ಆದೇಶ ಸಂಖ್ಯೆ:ಇಡಿ 626 ಪಿ.ಬಿ.ಎಸ್. 2014 ದಿನಾಂಕ:31.01.2015ರ ಪ್ರಕಾರ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ 9511 ಹುದ್ದೆಗಳ ನೇಮಕಾತಿಗೆ ಕಾರ್ಯಕಾರಿ ಆದೇಶದ ಮೂಲಕ ಅನುಮತಿಯನ್ನು ನೀಡಿದೆ.

ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಇಡಿ 290 ಎಸ್‌ಡಿಬಿ 2014 ದಿ:02.01.2015ರ ಪ್ರಕಾರ ಹೈದರಾಬಾದ್ ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಾದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಡಿಸೆಂಬರ್–31ರ ಒಳಗಾಗಿ ಖಾಲಿ ಇರುವ ಹುದ್ದೆಗಳನ್ನು ಗುರುತಿಸಿಕೊಂಡು ಜನವರಿ 2015 ರಿಂದ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಜೂನ್ ವೇಳೆಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ದಿನಾಂಕ:24.01.2015ರಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯಲ್ಲಿ ಮೀಸಲಾತಿ ಪ್ರಮಾಣವನ್ನು ನಿಗಧಿಗೊಳಿಸಿ ಆದೇಶವನ್ನು ಹೊರಡಿಸುವವರೆಗೂ ಸ್ಥಗಿತಗೊಳಿಸಲು ನೀಡಿರುವ ಆದೇಶವನ್ನು ಸಡಿಲಗೊಳಿಸಿ ಪ್ರಸ್ತುತ ಖಾಲಿ ಇರುವ ಪ್ರೌಢಶಾಲಾ ಸಹ ಶಿಕ್ಷಕರ ಮತ್ತು ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್–1 ವೃಂದದ 1137 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹೈದರಾಬಾದ್ ಕರ್ನಾಟಕ ಮೀಸಲಾತಿಗೆ ಒಳಪಡುವ ಆರು ಜಿಲ್ಲೆಗಳಲ್ಲಿ ಸ್ಥಳೀಯ ವೃಂದದ ಮೀಸಲಾತಿ ಬಗ್ಗೆ ಅಧಿಸೂಚನೆಗಳನ್ನು ನೇಮಕಾತಿ ಪ್ರಾಧಿಕಾರಗಳು ಹೊರಡಿಸಿದ್ದು ಈ ಬಗ್ಗೆ ಅಭಿಮತ ಸಲ್ಲಿಸಲು ದಿನಾಂಕ ನಿಗಧಿಪಡಿಸಿದ್ದು ಈ ಅವಧಿ ದಿನಾಂಕ:20.03.2015ಕ್ಕೆ ಮುಕ್ತಾಯವಾಗಲಿದ್ದು ನಂತರ ಸ್ಥಳೀಯ ವೃಂದ ನಿಗಧಿಪಡಿಸಿ ನೇಮಕಾತಿ ಪ್ರಕ್ರಿಯೆಯನ್ನು ಮಾರ್ಚ್ 2015ರ ಮಾಹೆಯಲ್ಲಿ ಅಧಿಸೂಚನೆ ಹೊರಡಿಸಿ 2014–15ನೇ ಸಾಲಿನ ನೇಮಕಾತಿಗೆ ಚಾಲನೆ ನೀಡಲಾಗುವುದು.